ಕಡಿಮೆ ಬಡ್ಡಿ ದರದಲ್ಲಿ ಸಾಲ

911 (1348); ಶ್ರೀ ಗುರುಪಾದಪ್ಪ ಸಂಗನಗೌಡ ಪಾಟೀಲ (ರೋಣ)

(ಅ) 2011–12, 2012–13 ಮತ್ತು 2013–14ನೇ ಸಾಲಿನಲ್ಲಿ ಧಾರವಾಡ, ಹಾವೇರಿ ಮತ್ತು ಗದಗ ಜಿಲ್ಲೆಯ ಸಹಕಾರಿ ಸಂಘಗಳಿಂದ ರೈತರಿಗೆ ಕಡಿಮೆ ಬಡ್ಡಿ ದರದಲ್ಲಿ ಎಷ್ಟು ರೈತರಿಗೆ ಎಷ್ಟು ಮೊತ್ತದ ಸಾಲ ವಿತರಣೆ ಮಾಡಲಾಗಿದೆ; ವರ್ಷವಾರು ವಿವರ ನೀಡುವುದು.

(ಆ) ಶೂನ್ಯ ಬಡ್ಡಿ ದರದಲ್ಲಿ ರೂ. ಮೂರು ಲಕ್ಷದವರೆಗೆ ಸಾಲ ಪಡೆದ ರೈತರುಗಳೆಷ್ಟು;

(ಇ) ಶೇ. 3 ರಷ್ಟು ಬಡ್ಡಿ ದರದಲ್ಲಿ ರೂ. 10 ಲಕ್ಷದವರೆಗೆ ಸಾಲ ಪಡೆದ ರೈತರುಗಳೆಷ್ಟು?

ಶ್ರೀ ಹೆಚ್. ಎಸ್. ಮಹದೇವ ಪ್ರಸಾದ (ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು)

(ಅ) 2011–12, 2012–13 ಮತ್ತು 2013–14 ನೇ ಸಾಲಿನಲ್ಲಿ ಧಾರವಾಡ, ಹಾವೇರಿ ಮತ್ತು ಗದಗ ಜಿಲ್ಲೆಯ ಸಹಕಾರಿ ಸಂಘಗಳಿಂದ ರೈತರಿಗೆ ಕಡಿಮೆ ಬಡ್ಡಿ ದರದಲ್ಲಿ ಬೆಳೆ ಸಾಲ ವಿತರಣೆ ಮಾಡಿದ ವರ್ಷವಾರು ವಿವರಣೆಯನ್ನು ಈ ಕೆಳಗೆ ನೀಡಲಾಗಿದೆ.

ಕ್ರ. ಸಂ.	ಜಿಲ್ಲೆಯ ಹೆಸರು	2011–12		2012–13		2013–14	
		ಸಂಖ್ಯೆ	ಮೊತ್ತ	ಸಂಖ್ಯೆ	ಮೊತ್ತ	ಸಂಖ್ಯೆ	ಮೊತ್ತ
1	ಧಾರವಾಡ	18378	8180.03	18543	8033.82	28002	9117.50
2	ಗದಗ	14729	8550.77	14729	5990.91	29642	8773.00
3	ಹಾವೇರಿ	31499	10860.88	31499	8929.69	38387	10034.05

(ಆ) 2014–15ನೇ ಸಾಲಿನಲ್ಲಿ ಮೇ ಅಂತ್ಯದ ವರೆಗೆ ಧಾರವಾಡ, ಹಾವೇರಿ ಮತ್ತು ಗದಗ ಜಿಲ್ಲೆಯ ಸಹಕಾರಿ ಸಂಘಗಳಿಂದ ಶೂನ್ಯ ಬಡ್ಡಿ ದರದಲ್ಲಿ ಬೆಳೆ ಸಾಲ ಪಡೆದ ರೈತರ ವಿವರಣೆಯನ್ನು ಈ ಕೆಳಗೆ ನೀಡಲಾಗಿದೆ.

ಕ್ರ. ಸಂ.	ಜಿಲ್ಲೆಯ ಹೆಸರು	ರೈತರ ಸಂಖ್ಯೆ
1	ಧಾರವಾಡ	6459
2	ಗದಗ	4325
3	ಹಾವೇರಿ	6437

(ಇ) ಶೇ. 3ರ ಬಡ್ಡಿ ದರದಲ್ಲಿ `10.00 ಲಕ್ಷದವರೆಗೆ ಧಾರವಾಡ ಜಿಲ್ಲೆಯ ಒಂದು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಮೂಲಕ 2013–14ನೇ ಸಾಲಿನಲ್ಲಿ 2 ಜನ ರೈತರಿಗೆ `11.00 ಲಕ್ಷಗಳ ಮಧ್ಯಮಾವಧಿ ಕೃಷಿ ಸಾಲ ನೀಡಲಾಗಿದೆ.

ಖಾಲಿ ಹುದ್ದೆಗಳ ಭರ್ತಿ

912 (1349); ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ (ರೋಣ)

(ಅ) ಗದಗ ಜಿಲ್ಲೆಯಲ್ಲಿರುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ; (ವಿವರ ನೀಡುವುದು)

(ಆ) ಸಹಾಯಕ ಕಾರ್ಯನಿರ್ವಾಹಕ ಹಾಗೂ ಕಿರಿಯ ಅಭಿಯಂತರರ ಹುದ್ದೆಗಳು ಎಷ್ಟು ಖಾಲಿ ಇವೆ;

(ಇ) ಹುದ್ದೆಗಳನ್ನು ಭರ್ತಿ ಮಾಡುವ ಚಿಂತನೆ ಸರ್ಕಾರದ ಮುಂದಿದೆಯೇ?

ಡಾ: ಖಮರುಲ್ ಇಸ್ಲಾಂ. (ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು)

(ಅ) ಗದಗ ಜಿಲ್ಲೆಯಲ್ಲಿನ 9 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಎಲ್ಲಾ ವೃಂದಗಳಲ್ಲಿ ಮಂಜೂರಾದ ಹುದ್ದೆಗಳ ಪೈಕಿ ಒಟ್ಟು 179 ಹುದ್ದೆಗಳು ಖಾಲಿ ಇರುತ್ತವೆ. ಖಾಲಿ ಇರುವ ಹುದ್ದೆಗಳ ವೃಂದವಾರು ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.